# ತಾಂತ್ರಿಕ ಶಿಕ್ಷಣ ಇಲಾಖೆ ನಡವಳಿಗಳು

ವಿಷಯ: ಶ್ರೀ ಹುಡೇದ್.ಎಂ.ಬಿ, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ ಇವರು 2012ರ ಡಿಪ್ಲೊಮಾ ಪರೀಕ್ಷಾ ಮೌಲ್ಯಮಾಪನದಲ್ಲಿ ಕರ್ತವ್ಯ ನಿರ್ಲಕ್ಷತೆ ಎಸಗಿರುವ ಬಗ್ಗೆ.

* * * *

ಉಲ್ಲೇಖ: 1. ಮಾನ್ಯ ಉನ್ನತ ಶಿಕ್ಷಣ ಸಚಿವರ ಟಿಪ್ಪಣಿ ಪತ್ರ ದಿ: 12-03-2013

2. ಪೂರ್ವಭಾವಿ ಇಲಾಖಾ ವಿಚಾರಣೆ ನಡೆಸಲು ನೇಮಿಸಲಾದ ಜ್ಞಾಪನ ಪತ್ರ ದಿ: 12-3-2013

3. ಕಾರ್ಯದರ್ಶಿಯವರು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರ ಪೂರ್ವಭಾವಿ ವಿಚಾರಣಾ ವರದಿ ದಿನಾಂಕ: 16-03-2013

**ಪ್ರಸ್ತಾವನೆ:**

ಎಸ್‌ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿರುವ ಕೆಲವು ವಿದ್ಯಾರ್ಥಿಗಳು ಪರೀಕ್ಷೆ ಪೋಟೋ ಪ್ರತಿಗಳನ್ನು ಪಡೆದಿದ್ದು, ಮೌಲ್ಯಮಾಪನದಲ್ಲಿನ ದೋಷದಿಂದಾಗಿ ಸೊನ್ನೆ ಅಂಕ ಬಂದಿರುತ್ತದೆ ಎಂದು ದೂರು ಸಲ್ಲಿಸಿರುತ್ತಾರೆ. ಈ ಪ್ರಕರಣವು ದಿನಾಂಕ: 12-03-2013 ರಂದು ಟಿವಿ 9 ಮತ್ತು ಸಮಯ ಮಾಧ್ಯಮಗಳಲ್ಲಿ ಪ್ರಸಾರಗೊಂಡಿರುತ್ತದೆ ಮತ್ತು ದಿನಾಂಕ: 13-03-2013 ರಂದು ಕನ್ನಡ ದಿನಪತ್ರಿಕೆಗಳಾದ ಪ್ರಜಾವಾಣಿ, ವಿಜಯಕರ್ನಾಟಕ ದಲ್ಲಿಯೂ ಪ್ರಕಟಗೊಂಡಿರುತ್ತದೆ. ಉಲ್ಲೇಖ (1)ರಲ್ಲಿ ಕಾಣಿಸಿರುವ ಟಿಪ್ಪಣಿ ಪತ್ರ ದಿನಾಂಕ: 12-03-2013 ರಲ್ಲಿ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ 02 ದಿನಗಳೊಳಗೆ ತನಿಖೆ ನಡೆಸಿ ವರದಿ ಸಲ್ಲಿಸಲು ಮಾನ್ಯ ಉನ್ನತ ಶಿಕ್ಷಣ ಸಚಿವರು ಸೂಚಿಸಿದ್ದರಿಂದ, ಉಲ್ಲೇಖ(2)ರಲ್ಲಿನ ಜ್ಞಾಪನದಲ್ಲಿ ಪೂರ್ವಭಾವಿ ತನಿಖೆ ನಡೆಸಲು ಶ್ರೀ ಆನಂದ ಪೂಜಾರಿ, ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ ಇವರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯವರು ಪೂರ್ವಭಾವಿ ವಿಚಾರಣೆ ನಡೆಸಿ ದಿನಾಂಕ: 16-03-2013 ರಂದು ವರದಿ ಸಲ್ಲಿಸಿರುತಾರೆ. ಈ ವರದಿಯನ್ನು ಪರಿಶೀಲಿಸಿದಾಗ 2012ರ ನವೆಂಬರ್-ಡಿಸೆಂಬರ್ ಸೆಮಿಸ್ಟರ್ ಡಿಪ್ಲೊಮಾ ಪರೀಕ್ಷಾ ಮೌಲ್ಯಮಾಪನ ಕಾರ್ಯಗಳ ಸಂಬಂಧ ಅಪ್ಲೈಡ್ ಮ್ಯಾಥಮೆಟಿಕ್ಸ್ – II (9SC02M) ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ಹುಬ್ಬಳ್ಳಿ ಮೌಲ್ಯಮಾಪನ ಕೇಂದ್ರದಲ್ಲಿ ಕೆ.ಎಲ್.ಇ ಪಾಲಿಟೆಕ್ನಿಕ್, ಮಹಾಲಿಂಗಪುರ ಇಲ್ಲಿನ ವಿಜ್ಞಾನ ಉಪನ್ಯಾಸಕರಾದ ಶ್ರೀ ಎಸ್.ಎಸ್.ಹಿರೇಮಠ ಇವರ ಅಸಮರ್ಪಕ/ Erratic ನಿರ್ಲಕ್ಷ್ಯದಿಂದ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಮಾಡಿರುತ್ತಾರೆ.

ಶ್ರೀ ಎಸ್.ಎಸ್.ಹಿರೇಮಠ್, ಇವರು ಮೌಲ್ಯಮಾಪನ ಮಾಡಿದ ಉತ್ತರ ಪತ್ರಿಕೆಗಳನ್ನು ಮರು ಮೌಲ್ಯಮಾಪನ ಮಾಡಿದ ನಂತರ ಸೊನ್ನೆ ನೀಡಿದ ಉತ್ತರ ಪತ್ತಿಕೆಗಳಲ್ಲಿ ಅಂಕಗಳು ವ್ಯತ್ಯಾಸಗೊಂಡಿರುತ್ತದೆ. ಕೆಲವು ಉತ್ತರ ಪತ್ರಿಕೆಗಳನ್ನು ತಿದ್ದಿರುವುದು (Tampering) ತನಿಖಾ ವರದಿಯಿಂದ ತಿಳಿದು ಬಂದಿರುತ್ತದೆ.

ಹುಬ್ಬಳ್ಳಿಯ ಮೌಲ್ಯಮಾಪನ ಕೇಂದ್ರದಲ್ಲಿ ಶ್ರೀ ಎಸ್.ಎಸ್.ಹಿರೇಮಠ್, ಇವರು ಮೌಲ್ಯಮಾಪನ ಮಾಡಿದ ಉತ್ತರ ಪತ್ರಿಕೆಗಳನ್ನು ಶ್ರೀ ಎಂ.ಬಿ.ಹುಡೇದ್, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ ಇವರಿಂದ ರಿವ್ಯೂ ಮಾಡಿಸಲು ವಹಿಸಲಾಗಿತ್ತು. ಆದರೆ ಶ್ರೀ ಎಂ.ಬಿ.ಹುಡೇದ್ ಇವರು ಸಮರ್ಪಕವಾಗಿ ರಿವ್ಯೂ ಮಾಡಿಲ್ಲದ ಪ್ರಯುಕ್ತ ಮತ್ತು ಇವರ ಕರ್ತವ್ಯ ನಿರ್ಲಕ್ಷ್ಯತೆಯಿಂದ ಮೌಲ್ಯಮಾಪನದಲ್ಲಿ ದೋಷಪೂರಿತಗೊಂಡು ಮನಸೋ ಇಚ್ಛೆ ಅಂಕ ನೀಡಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾರಕವಾಗಿರುತ್ತದೆ.

ಸರ್ಕಾರಿ ನೌಕರರಾದ ಶ್ರೀ ಎಂ.ಬಿ.ಹುಡೇದ್, ಉಪನ್ಯಾಸಕರು(ವಿಜ್ಞಾನ ವಿಭಾಗ), ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ, ಇವರು ಉತ್ತರ ಪತ್ರಿಕೆಗಳನ್ನು ಸಮರ್ಪಕವಾಗಿ ರಿವ್ಯೂ ಮಾಡದೆ ಈ ಪ್ರಕರಣಕ್ಕೆ ಕಾರಣೀಭೂತರಾಗಿದ್ದು, ಕರ್ತವ್ಯ ಲೋಪ ಎಸಗಿದ್ದು, ಬೇಜವಾಬ್ದಾರಿತನದಿಂದ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಆದ್ದರಿಂದ ಕೆ.ಸಿ.ಎಸ್.ಆರ್. 1966 ರ ನಿಯಮ(3)ರ ಪ್ರಕಾರ ತಮ್ಮ ಕರ್ತವ್ಯವನ್ನು ಸರಿಯಾಗಿ ನಿರ್ವಹಿಸದೆ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಈ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಆದೇಶ ಸಂ: ಡಿಟಿಇ 30 ಡಿಇಕ್ಯೂ(1) 2012, ದಿನಾಂಕ: 16-03-2013**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಶ್ರೀ ಹುಡೇದ್.ಎಂ.ಬಿ, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ ಇವರ ಈ ರೀತಿಯ ವರ್ತನೆಯು ಒಬ್ಬ ಸರ್ಕಾರಿ ನೌಕರನಿಗೆ ತರವಲ್ಲದ ವರ್ತನೆಯಾಗಿದ್ದು, ಕರ್ನಾಟಕ ನಾಗರೀಕ ಸೇವಾ (ವರ್ತನೆ) ನಿಯಮಗಳು 1966ರ ನಿಯಮ 3 (1) (i) (ii) ಮತ್ತು (iii) ನ್ನು ಉಲ್ಲಂಘಿಸಿ ಕರ್ತವ್ಯದಲ್ಲಿ ಲೋಪ ಮತ್ತು ನಿರ್ಲಕ್ಷತೆ ತೋರಿರುವ ಹಿನ್ನೆಲೆಯಲ್ಲಿ ಅವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಶ್ರೀ ಹುಡೇದ್.ಎಂ.ಬಿ, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ ಇವರನ್ನು ಕರ್ನಾಟಕ ಸರ್ಕಾರಿ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)

ನಿಯಮಗಳು 1957 ರ ನಿಯಮ 10(1)(ಡಿ) ರನ್ವಯ ತಕ್ಷಣದಿಂದಲೇ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತ್ತಿನಲ್ಲಿರಿಸಲಾಗಿದೆ.

ಸದರಿಯವರು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ ಹಾಗೂ ಇಲಾಖೆಯ ಪೂರ್ವಾನುಮತಿ ಇಲ್ಲದೆಯೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

**ನಿರ್ದೇಶಕರು**
**ಹಾಗೂ ಶಿಸ್ತು ಪ್ರಾಧಿಕಾರ,**
**ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.**

**ಇವರಿಗೆ,**

1 ಶ್ರೀ ಹುಡೇದ್.ಎಂ.ಬಿ, ಆಯ್ಕೆ ಶ್ರೇಣಿ ಉಪನ್ಯಾಸಕರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ (ಪ್ರಿನ್ಸಿಪಾಲರ ಮುಖಾಂತರ).

2. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ –ಸದರಿಯವರಿಗೆ ಅಮಾನತ್ತಿನ ಆದೇಶವನ್ನು ಜಾರಿ ಮಾಡಿ ವರದಿಯನ್ನು ಈ ಕಛೇರಿಗೆ ಕಳುಹಿಸುವ ಸೂಕ್ತ ಕ್ರಮಕ್ಕಾಗಿ.

ಪ್ರತಿ: ಮಾಹಿತಿಗಾಗಿ.

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂ: 252, 2ನೇ ಮಹಡಿ, ವಿಧಾನಸೌಧ, ಬೆಂಗಳೂರು
2. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, [ಉನ್ನತ ಶಿಕ್ಷಣ], ಬಹುಮಹಡಿಗಳ ಕಟ್ಟಡ, ಬೆಂಗಳೂರು–1.
3. ಪತ್ರಿಕಾ ಕಾರ್ಯದರ್ಶಿಗಳು, ಮಾನ್ಯ ಮುಖ್ಯಮಂತ್ರಿಯವರ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು
5. ನಿರ್ದೇಶಕರ ಆಪ್ತಶಾಖೆಗೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
6. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಇಎಸ್‌ಟಿ (1)ಎ, 9, 7, ವಿಭಾಗಗಳಿಗೆ.
8. ಕಛೇರಿ ಪ್ರತಿ.